ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 768
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಆರ್ ಧರ್ಮಸೇನ
ಉತ್ತರಿಸಬೇಕಾದ ದಿನಾಂಕ : 25.09.2020
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	2020-21ನೇ ಸಾಲಿನ ಆಯವ್ಯಯದಲ್ಲಿ ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ 500 ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಮೊಬೈಲ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾಧನಗಳನ್ನು ಒಳಗೊಂಡ ತಲಾ 25,000 ರೂಪಾಯಿಗಳ ಕಿಟ್‌ಗಳನ್ನು ವಿತರಿಸಲಾಗುವುದೆಂದು ಘೋಷಣೆ ಮಾಡಿದ್ದು, ಇದು ಅನುಷ್ಠಾನಕ್ಕೆ ಬಂದಿದೆಯೇ;	2020-21ನೇ ಸಾಲಿನ ಆಯವ್ಯಯದಲ್ಲಿ ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ 500 ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಮೊಬೈಲ್, ಬ್ರೈಲ್‌ವಾಚ್, ವಾಕಿಂಗ್‌ಸ್ಟಿಕ್ ಮತ್ತು ಇನ್ನಿತರ ಸಾಧನಗಳನ್ನು ಒಳಗೊಂಡ ತಲಾ ರೂ.25,000ಗಳ ಕಿಟ್‌ಗಳನ್ನು ವಿತರಿಸುವ ಪ್ರಸ್ತಾವನೆಗೆ ಆರ್ಥಿಕ ಮತ್ತು ಯೋಜನೆ ಇಲಾಖೆಯ ಸಹಮತಿ ಕೋರಲಾಗಿದೆ. ಸಹಮತಿ ಸ್ವೀಕೃತವಾದೊಡನೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಸರ್ಕಾರಿ ಆದೇಶವನ್ನು ಹೊರಡಿಸಲಾಗುವುದು.
ಆ)	ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಜನ ಫಲಾನುಭವಿಗಳಿಗೆ ವಿತರಿಸಲಾಗಿದೆ;	ಆಡಳಿತಾತ್ಮಕ ಅನುಮೋದನೆ ಕುರಿತು ಆದೇಶ ಹೊರಡಿಸಿದ ನಂತರ ವಿತರಣೆ ಕುರಿತು ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು.
ಇ)	ವಿತರಿಸದಿದ್ದಲ್ಲಿ ಯಾವಾಗ ವಿತರಿಸಲಾಗುವುದು?	

ಸಂಖ್ಯೆ: ಮಮಇ 224 ಪಿಹೆಚ್‌ಪಿ 2020

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು